## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2008-09 ನೇ ಸಾಲಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು ಮುಂದುವರಿಸುವ ಬಗ್ಗೆ.

ಉಲ್ಲೇಖ: 1) ನಿರ್ದೇಶಕರು, ಆಕುಕ ಸೇವೆಗಳು ಇವರ ಪತ್ರ ಸಂಖ್ಯೆ: ಪಿಎಲ್ಎನ್(1)40/07-08 ದಿ:29-03-2008

2) ಸರ್ಕಾರದ ಆದೇಶ ಸಂಖ್ಯೆ:ಆಕುಕ 361 ಸಿಜಿಎಂ 2007 ದಿ:04-05-2007

3) ಸರ್ಕಾರದ ಅಪರ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:28-03-2008 ರಂದು ನಡೆದ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನ

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ದಿ:29-03-2008ರ ಪತ್ರದಲ್ಲಿ ರಾಜ್ಯದ ಆರೋಗ್ಯ ವಲಯಕ್ಕೆ ಸಂಬಂಧಿಸಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಚಾಲ್ತಿಯಲ್ಲಿರುವ ಯೋಜನೆಗಳನ್ನು ದಿ:01-04-2008 ರಿಂದ 31-03-2009 ರವರೆಗೆ 2008-09ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ 2007-08ನೇ ಸಾಲಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು ದಿನಾಂಕ: 01-04-2007 ರಿಂದ 31-03-2008ರವರೆಗೆ ಮುಂದುವರೆಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (3)ರಲ್ಲಿನ ವಿವಿಧ ಹಂತದ ಪರಿಶೀಲನಾ ಸಭಾ ನಡವಳಿಯಲ್ಲಿ ಆರೋಗ್ಯ ಇಲಾಖೆಯಲ್ಲಿನ ಮುಂದುವರಿಸಿದ ಯೋಜನೆಗಳ ಬಗ್ಗೆ ಚರ್ಚಿಸಿ ಆರ್ಥಿಕ ಇಲಾಖೆ ಮತ್ತು ಯೋಜನಾ ಇಲಾಖೆಯ ಪ್ರತಿನಿಧಿಗಳು ಮುಂದುವರೆದ ಯೋಜನೆಗಳನ್ನು ಮುಂದುವರೆಸಲು ತೀರ್ಮಾನಿಸಿ ಒಪ್ಪಿಗೆ ನೀಡಿರುತ್ತಾರೆ.

ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಆಕುಕ 100 ಸಿಜಿಎಂ 2008
## ಬೆಂಗಳೂರು ದಿನಾಂಕ:01-04-2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದಲ್ಲಿನ ಯೋಜನಾ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಇದರೊಂದಿಗೆ ಲಗತ್ತಿಸಿರುವ ಅನುಬಂಧ-1 ಮತ್ತು 2ರಲ್ಲಿ ನಮೂದಿಸಿರುವ ಚಾಲ್ತಿಯಲ್ಲಿರುವ ಯೋಜನೆಗಳನ್ನು ದಿ:01-04-2008 ರಿಂದ 31-03-2009 ರವರೆಗೆ ಮುಂದುವರೆಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರವು ಮಂಜೂರಾತಿ ನೀಡಿದೆ. ಮುಂದುವರೆದ ಯೋಜನೆಗಳ ವೇತನ ಮತ್ತು ವೇತನೇತರ ವಿವರಗಳನ್ನು ಅನುಬಂಧ-3ರಲ್ಲಿ ನೀಡಲಾಗಿದೆ.

1) ಈ ಯೋಜನೆಗಳಿಗೆ ಯಾವುದೇ ಮಾರ್ಪಾಡು ಅಥವಾ ಹೊಂದಾಣಿಕೆ ಮಾಡಕೂಡದು.
2) ಮುಂದುವರೆದ ಯೋಜನೆಗಳಲ್ಲಿ ಯಾವುದಾದರೂ ಹೊಸ ಘಟಕವು (New Component) ಹುದ್ದೆಗಳ ಸೃಜನೆ, ವಾಹನಗಳ ಖರೀದಿ ಇತ್ಯಾದಿ ಒಳಗೊಂಡಿದ್ದಲ್ಲಿ ಈ ಬಗ್ಗೆ ಅಧಿಕಾರಯುಕ್ತ ಸಮಿತಿಯ ಮುಂದೆ ಸೂಕ್ತ ಪ್ರಸ್ತಾವನೆಯನ್ನು ಮಂಡಿಸಲು ಕ್ರಮ ಕೈಗೊಳ್ಳತಕ್ಕದ್ದು.
3) ಜಿಲ್ಲಾ ಪಂಚಾಯತ್‌ಗಳಿಂದ ಅನುಷ್ಠಾನಗೊಳಿಸಲ್ಪಡುವ ಜಿಲ್ಲಾ ವಲಯದ ಯೋಜನೆಗಳನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳು ಮುಂದುವರೆಸುವುದು.
4) 2008-09ನೇ ಸಾಲಿನಲ್ಲಿ ಮುಂದುವರೆದ ಕಾಮಗಾರಿಗಳು ಹಾಗೂ 2007-08ನೇ ಸಾಲಿನಲ್ಲಿ ಹೊಸದಾಗಿ ಕೈಗೊಂಡ ಅಪೂರ್ಣ ಕಾಮಗಾರಿಗಳಿಗೆ ಪ್ರಸಕ್ತ ಸಾಲಿನಲ್ಲಿ ಆಯವ್ಯಯ ಅವಕಾಶ ಒದಗಿಸಿರುವುದನ್ನು ಖಚಿತ ಪಡಿಸಿಕೊಂಡು ಮುಂದುವರೆಸುವುದು.
5) 2008-09ನೇ ಸಾಲಿನ ಹೊಸ ಯೋಜನೆಗಳಿಗೆ ಪ್ರತ್ಯೇಕವಾಗಿ ಮಂಜೂರಾತಿಯನ್ನು ಪಡೆಯುವುದು.
6) ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನಾ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಮುಂದುವರೆಸಿರುವುದನ್ನು ಹಾಗೂ ಹಣ ಒದಗಿಸಿರುವುದನ್ನು ಖಾತರಿ ಪಡಿಸಿಕೊಂಡು ಅಂತಹ ಯೋಜನಾ ಕಾರ್ಯಕ್ರಮಗಳನ್ನು ಮುಂದುವರೆಸುವುದು.

ಭಾರತ ರಾಷ್ಟ್ರಪತಿಯವರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಐ.ಹೇಮನಾಥ್ 1/4/09
(ಐ.ಹೇಮನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಗೆ:

1) ಮಹಾಲೇಖಪಾಲರು, ಲೆಕ್ಕಪತ್ರ (1 ಮತ್ತು 2) ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3) ಯೋಜನಾ ಆಡಳಿತಾಧಿಕಾರಿಗಳು, ಕೆ.ಹೆಚ್.ಎಸ್.ಡಿ.ಪಿ., ಬೆಂಗಳೂರು.
4) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
5) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು : ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6) ಎಲ್ಲಾ ಜಿಲ್ಲಾ ಪರಿಷತ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
7) ಯೋಜನಾ ನಿರ್ದೇಶಕರು, ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಆಕುಕ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
8) ಯೋಜನಾ ನಿರ್ದೇಶಕರು, ಆರ್.ಸಿ.ಹೆಚ್, ಆಕುಕ ಸೇವೆಗಳು, ಬೆಂಗಳೂರು.
9) ಸಹ ನಿರ್ದೇಶಕರು ಆರೋಗ್ಯ ಮತ್ತು ಯೋಜನೆ : ವೈದ್ಯಕೀಯ : ನೇತ್ರ : ಕುಷ್ಠ : ಕ್ಷಯ : ಸಾಂಕ್ರಾಮಿಕ ರೋಗ, ಆಕುಕ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
10) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
11) ಯೋಜನಾ ಇಲಾಖೆ : ಆರ್ಥಿಕ ಇಲಾಖೆ (ವೆಚ್ಚ-5)
12) ಆಂತರಿಕ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
13) ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.